# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇತರೆ ಪರೀಕ್ಷೆಗಳು

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.**

ಸಂಖ್ಯೆ: ಆರ್(6)/ಡಿ.ಡಿ.ಎ/ಡಿ.ಟಿ.ಎ/ಪರೀಕ್ಷೆ/11/2021-22 ದಿನಾಂಕ: 23/03/2022

## ಅಧಿಸೂಚನೆ

**ವಿಷಯ:** 2022ರ ಮೇ ಮಾಹೆಯಲ್ಲಿ ನಡೆಯಲಿರುವ ಡಿಪ್ಲೊಮಾ ಇನ್ ಡ್ರಾಮಾ ಆರ್ಟ್ಸ್ ಪರೀಕ್ಷೆಗೆ ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆ, ಸಾಣೆಹಳ್ಳಿ, ಚಿತ್ರದುರ್ಗ ಜಿಲ್ಲೆ ಸಂಸ್ಥೆಯ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 206 ಕಸಧ 2009 ದಿ: 07-05-2009

*****

ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆ, ಸಾಣೆಹಳ್ಳಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಸಂಸ್ಥೆಯ ಡಿಪ್ಲೊಮಾ ಇನ್ ಡ್ರಾಮಾ ಆರ್ಟ್ಸ್ ಪರೀಕ್ಷೆಯನ್ನು 2022ರ ಮೇ ಮಾಹೆಯಲ್ಲಿ ದಿನಾಂಕ: 16-05-2022 ರಿಂದ 23-05-2022ರವರೆಗೆ ನಡೆಸಲು ಮಂಡಳಿಯು ನಿರ್ಧರಿಸಿ, ಪರೀಕ್ಷಾ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಸದರಿ ಸಂಸ್ಥೆಯ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪರೀಕ್ಷೆ ತೆಗೆದುಕೊಳ್ಳಲು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ತಮ್ಮ ಸಂಸ್ಥೆಯ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

**ಪರೀಕ್ಷೆ ತೆಗೆದುಕೊಳ್ಳಲು ಅರ್ಹತೆಗಳು:-**

- ವಿದ್ಯಾರ್ಥಿಗಳು ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.
- ಪ್ರಥಮ ಬಾರಿಗೆ ಕುಳಿತುಕೊಳ್ಳುವ ಎಲ್ಲಾ ವಿದ್ಯಾರ್ಥಿಗಳಿಗೆ ಎಲ್ಲಾ ವಿಷಯಗಳು (ಬಾಹ್ಯ, ಆಂತರಿಕ ಹಾಗೂ ಪ್ರಾಯೋಗಿಕ) ಕಡ್ಡಾಯವಾಗಿರುತ್ತದೆ.

**ವಿಷಯ ಹಾಗೂ ವಿಷಯವಾರು ನಿಗಧಿಪಡಿಸಲಾದ ಅಂಕಗಳ ವಿವರ:**

| ಕ್ರ. ಸಂ. | ವಿಷಯ | ವಿಷಯ ಸಂಕೇತ | ಅಂಕಗಳು | | |
|---|---|---|---|---|---|
| | | | ಆಂತರಿಕ | ಬಾಹ್ಯ | ಒಟ್ಟು |
| 1. | ಭಾರತೀಯ ರಂಗಭೂಮಿ<br>Indian theatre | ಡಿ.ಡಿ.ಎ-01<br>DDA-01 | 50 | 50 | 100 |
| 2. | ಕನ್ನಡ ನಾಟಕ ಮತ್ತು ಸಾಹಿತ್ಯ ಪರಂಪರೆ<br>Kannada plays & Traditions of literature | ಡಿ.ಡಿ.ಎ-02<br>DDA-02 | 50 | 50 | 100 |

| | | | | | |
|---|---|---|---|---|---|
| 3. | ಪಾಶ್ಚಾತ್ಯ ರಂಗಭೂಮಿ<br>Western theatre | ಡಿ.ಡಿ.ಎ–03<br>DDA-03 | 50 | 50 | 100 |
| 4. | ಅಭಿನಯ<br>Acting | ಡಿ.ಡಿ.ಎ–04<br>DDA-04 | 100 | 100 | 200 |
| 5. | ಆಹಾರ್ಯ<br>Aharya | ಡಿ.ಡಿ.ಎ–05<br>DDA-05 | 100 | 100 | 200 |
| 6. | ಶಿಕ್ಷಣದಲ್ಲಿ ರಂಗಭೂಮಿ<br>Theatre in Education | ಡಿ.ಡಿ.ಎ–06<br>DDA-06 | 100 | 100 | 200 |
| 7. | ರಂಗ ಪ್ರಯೋಗಗಳು<br>Theatre Practice &<br>ಮೌಖಿಕ ಪರೀಕ್ಷೆ<br>Viva Voce | ಡಿ.ಡಿ.ಎ–07<br>DDA-07 | 50 | 50 | 100 |

- ವಿದ್ಯಾರ್ಥಿಗಳು ತೇರ್ಗಡೆ ಹೊಂದಲು 1000 ಅಂಕಗಳಿಗೆ (ಬಾಹ್ಯ, ಆಂತರಿಕ ಮತ್ತು ಪ್ರಾಯೋಗಿಕ) ಕನಿಷ್ಠ 400 ಅಂಕಗಳನ್ನು ಪಡೆದಿರಬೇಕು (ಶೇ.40) ವಿದ್ಯಾರ್ಥಿಯು ತೇರ್ಗಡೆಗೆ ಪ್ರತಿ ವಿಷಯದಲ್ಲಿ ಶೇ.40 ಅಂಕಗಳನ್ನು ಒಟ್ಟಾರೆ ಶೇ.40 ಅಂಕಗಳನ್ನು ಪಡೆದಿರಬೇಕು.
- ಶೇಕಡ 60 ಮತ್ತು ಅದಕ್ಕಿಂತ ಮೇಲ್ಪಟ್ಟು ಪ್ರಥಮ ದರ್ಜೆ.
- ಶೇಕಡ 50 ರಿಂದ ಶೇಕಡ 60ರ ಒಳಗೆ ದ್ವಿತೀಯ ದರ್ಜೆ.
- ಶೇಕಡ 40 ರಿಂದ ಶೇಕಡ 50ರ ಒಳಗೆ ಉತ್ತೀರ್ಣ.
- ಒಂದೇ ಬಾರಿಗೆ ತೇರ್ಗಡೆಯಾದವರಿಗೆ ಮಾತ್ರ ದರ್ಜೆ ನೀಡಲಾಗುವುದು ಮತ್ತು ಪುನರಾವರ್ತಿತ ವಿದ್ಯಾರ್ಥಿಗಳಿಗೆ ದರ್ಜೆ ನೀಡಲಾಗುವುದಿಲ್ಲ.

<u>ಪರೀಕ್ಷಾ ಶುಲ್ಕದ ವಿವರ:</u>

| ಶುಲ್ಕದ ವಿವರ | ಮೊಬಲಗು |
|---|---|
| ಪರೀಕ್ಷಾ ಶುಲ್ಕ | **ರೂ.1248–00** |
| ಅರ್ಜಿ ಶುಲ್ಕ | **ರೂ. 50–00** |
| ಪ್ರತಿ ಅಭ್ಯರ್ಥಿಗೆ ಒಟ್ಟು | **ರೂ.1298–00** |
| ಸಂಸ್ಥೆಯ ನೋಂದಣಿ ನವೀಕರಣ ಶುಲ್ಕ ಪ್ರತ್ಯೇಕವಾಗಿ | **ರೂ.1000–00** |

<u>ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ:</u>

- ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಯನ್ನು ಸಂಸ್ಥೆಯ ಮುಖ್ಯಸ್ಥರು ಮಂಡಳಿಯ ಜಾಲತಾಣದಲ್ಲಿ ತಮ್ಮ ಸಂಸ್ಥೆಯ ಲಾಗಿನ್ ಮೂಲಕ ಅಪ್‌ಲೋಡ್ ಮಾಡಬೇಕು. ನಿಗಧಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಕೆ ಪೂರ್ಣಗೊಂಡ ನಂತರ ಆನ್‌ಲೈನ್ ಮೂಲಕ ಕ್ರೆಡಿಟ್ ಕಾರ್ಡ್/ಡೆಬಿಟ್ ಕಾರ್ಡ್/ನೆಟ್ ಬ್ಯಾಂಕಿಂಗ್ ಮೂಲಕ ಹಾಗೂ ಆನ್‌ಲೈನ್‌ನಲ್ಲಿ ಚಲನ್ ಜನರೇಟ್ ಮಾಡುವ ವ್ಯವಸ್ಥೆ ಮಾಡಲಾಗಿದೆ. ಚಲನ್ ಮೂಲಕ ಶುಲ್ಕ ಪಾವತಿಸಲು ಚಲನ್‌ಅನ್ನು ಲಾಗಿನ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರಲ್ಲಿ ನಮೂದಿಸಿರುವ ಮೊತ್ತವನ್ನು ಅದೇ ಚಲನ್ ಬಳಸಿ ನಿಗಧಿತ ಅವಧಿಯಲ್ಲಿ ಯಾವುದೇ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸುವುದು.

- ಆನ್‌ಲೈನ್ ಹೊರತುಪಡಿಸಿ ಮತ್ಯಾವುದೇ ಚಲನ್, ಡಿ.ಡಿ. ಅಥವಾ ಚೆಕ್ ಮೂಲಕ ಮಾಡಲಾದ ಪಾವತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ. ವಿದ್ಯಾರ್ಥಿಗಳ ಶುಲ್ಕವನ್ನು ನಿಗಧಿತ ದಿನಾಂಕದ ನಂತರ ಚಲನ್ ಮೂಲಕ ಪಾವತಿಸಿದಲ್ಲಿ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಹಾಗೂ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದರೂ ಸಹ ಹಿಂದಿರುಗಿಸಲಾಗುವುದಿಲ್ಲ.

- ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸುವ ವ್ಯವಸ್ಥೆ ಮಾಡಲಾಗಿದ್ದು, ಆನ್‌ಲೈನ್ ಮೂಲಕ ಪಾವತಿಸಿದಲ್ಲಿ ಪಾವತಿಸಿರುವ ಬಗ್ಗೆ ಆನ್‌ಲೈನ್ ರಸೀದಿಯ ಪ್ರತಿಯನ್ನು <u>ಡಯಟ್ ಪ್ರಾಂಶುಪಾಲರ ಮೂಲಕ ಮಂಡಳಿಗೆ ಸಲ್ಲಿಸುವುದು.</u>

- ಮಂಡಳಿ ನಿಗಧಿಪಡಿಸಿದ ಕೊನೆಯ ದಿನಾಂಕಗಳು ಸರ್ಕಾರಿ ರಜಾ ದಿನವೆಂದು ಘೋಷಿಸಿದ್ದಲ್ಲಿ ಆ ದಿನದ ಮಾರನೆಯ ಕೆಲಸದ ದಿನವನ್ನು ಕೊನೆಯ ದಿನವೆಂದು ಪರಿಗಣಿಸಲಾಗುವುದು.

<u>ಪರೀಕ್ಷೆಗೆ ಸಂಬಂಧಿಸಿದ ಕಾರ್ಯ ಚಟುವಟಿಕೆಗಳನ್ನು ನಿಗಧಿಗೊಳಿಸಿರುವ ದಿನಾಂಕಗಳ ವಿವರ:</u>

| ಕ್ರ.ಸಂ | ವಿವರ | ದಿನಾಂಕ |
|---|---|---|
| 1 | ಅಧಿಸೂಚನೆ ಪ್ರಕಟಿಸುವುದು | 23-03-2022 |
| 2 | ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಆರಂಭದ ದಿನಾಂಕ | 21-04-2022 |
| 3 | ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | 25-04-2022 |
| 4 | ಆನ್‌ಲೈನ್‌ನಲ್ಲಿ ಚಲನ್ ಡೌನ್‌ಲೋಡ್ ಮಾಡಿಕೊಂಡು ಬ್ಯಾಂಕ್‌ನಲ್ಲಿ ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 27-04-2022 |
| 5 | ಡಯಟ್‌ನಿಂದ ಅರ್ಜಿಗಳನ್ನು ಅನುಮೋದಿಸಲು ಕೊನೆಯ ದಿನಾಂಕ | 29-04-2022 |
| 6 | ಪ್ರವೇಶ ಪತ್ರಗಳನ್ನು ಆನ್‌ಲೈನ್‌ನಲ್ಲಿ ಪ್ರಕಟಿಸುವ ದಿನಾಂಕ | 02-05-2022 |

<u>ಅರ್ಜಿಗಳನ್ನು ಸಲ್ಲಿಸಲು ಸಂಸ್ಥೆಯ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:</u>

- 2022ರ ಮೇ ಮಾಹೆಯ ಡಿ.ಡಿ.ಎ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ನೋಂದಣಿ ಮಾಹಿತಿಯನ್ನು ಮಂಡಳಿಯ ಜಾಲತಾಣ: <u>https:/sslc.karnataka.gov.in</u> ಇಲ್ಲಿ Login/Other Exams DDA/DTA/FILM ACTING Examination Login ಮೂಲಕ ಸಂಸ್ಥೆಯ ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಗಳನ್ನು Upload ಮಾಡಲು ಸೂಚಿಸಿದೆ.

- ಸಂಸ್ಥೆಯ ನೋಂದಣಿ ನವೀಕರಣ ಶುಲ್ಕ ರೂ. 1000/- ಗಳನ್ನು ಪಾವತಿಸಲು ಸಂಸ್ಥೆಯ ಲಾಗಿನ್‌ನಲ್ಲಿ ಅವಕಾಶ ಕಲ್ಪಿಸಲಾಗುತ್ತದೆ. ಈ ನವೀಕರಣ ಶುಲ್ಕವನ್ನು ಆನ್‌ಲೈನ್ ಮೂಲಕ ಕ್ರೆಡಿಟ್‌ಕಾರ್ಡ್/ಡೆಬಿಟ್‌ಕಾರ್ಡ್/ನೆಟ್ ಬ್ಯಾಂಕಿಂಗ್ ಮೂಲಕ ಪಾವತಿಸಬಹುದಾಗಿರುತ್ತದೆ. ಅಥವಾ ಲಾಗಿನ್‌ನಲ್ಲಿ ಜನರೇಟ್ ಆದ ಚಲನ್‌ನನ್ನು ಯಾವುದೇ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಬಹುದಾಗಿರುತ್ತದೆ. ಶುಲ್ಕ ಪಾವತಿಸಿದ ಆನ್‌ಲೈನ್/ಚಲನ್ ಪ್ರತಿಯ ಹಾರ್ಡ್ ಪ್ರತಿಯನ್ನು ಡಯಟ್ ಲಾಗಿನ್‌ನಲ್ಲಿ ಅನುಮೋದಿಸಿದ ನಂತರವಷ್ಟೇ ವಿದ್ಯಾರ್ಥಿಗಳ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ.

- ಮಂಡಳಿಯಿಂದ ನೀಡಲಾಗಿರುವ ಸಂಸ್ಥೆಯ ಲಾಗಿನ್ ಮೂಲಕ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು ಮತ್ತು ವಿದ್ಯಾರ್ಥಿಯ ಹುಟ್ಟಿದ ದಿನಾಂಕ, ಇತ್ಯಾದಿಗಳನ್ನು ಹತ್ತನೇ ತರಗತಿಯ ಅಂಕಪಟ್ಟಿಯ ಆಧಾರದ ಮೇಲೆ ದಾಖಲಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ಅಂಕಪಟ್ಟಿಯನ್ನು ಸ್ಕ್ಯಾನ್ ಮಾಡಿ, ಅಪ್‌ಲೋಡ್ ಮಾಡುವುದು.

- ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ನಿಗಧಿಪಡಿಸಿದ ದಿನಾಂಕದೊಳಗೆ ತಿದ್ದುಪಡಿ ಮಾಡಿಕೊಳ್ಳಲು ಸಂಸ್ಥೆಯ ಲಾಗಿನ್‌ನಲ್ಲಿ Update Application Option ನೀಡಲಾಗಿದೆ. ಡಯಟ್ ಅನುಮೋದನೆಗಿಂತ ಮೊದಲು ತಮ್ಮ ಸಂಸ್ಥೆಯ ಲಾಗಿನ್‌ನಲ್ಲಿ ತಿದ್ದುಪಡಿಗಳನ್ನು ಮಾಡಬಹುದಾಗಿದ್ದು, ಡಯಟ್ ಸಂಸ್ಥೆಯವರು ಅನುಮೋದನೆ ಮಾಡಿದ ನಂತರ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

- ನಿಗಧಿಪಡಿಸಿದ ದಿನಾಂಕದ ನಂತರ ಯಾವುದೇ ತಿದ್ದುಪಡಿಗಳಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಮಂಡಳಿಯ ಗಮನಕ್ಕೆ ತಂದು ರೂ.200/-ದಂಡ ಶುಲ್ಕ ಪಾವತಿಸಿ ಸರಿಪಡಿಸಿಕೊಳ್ಳುವುದು.

- ಪತ್ರ ವ್ಯವಹಾರಕ್ಕೆ ಅನುಕೂಲಕರವಾದ ಅಂಚೆ ವಿಳಾಸ, ಮೊಬೈಲ್ ಫೋನ್ ಸಂಖ್ಯೆ ಭರ್ತಿ ಮಾಡಲು ಅವಕಾಶ ನೀಡಲಾಗುತ್ತದೆ.

- ಪರೀಕ್ಷಾ ಅರ್ಜಿಗಳನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಸಲ್ಲಿಸುವ ಸಮಯದಲ್ಲಿ ವಿದ್ಯಾರ್ಥಿಗಳ ನೇರ ಭಂಗಿಯ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿ ಅಪ್ ಲೋಡ್ ಮಾಡುವುದು ಕಡ್ಡಾಯ.

- ಭಾವಚಿತ್ರವನ್ನು ಮಾತ್ರವೇ ಸ್ಕ್ಯಾನ್ ಮಾಡಿಕೊಂಡು ಅಪ್‌ಲೋಡ್ ಮಾಡಿಕೊಳ್ಳಬೇಕೇ ಹೊರತು ಇಡೀ ಪೇಪರ್ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಂತಿಲ್ಲ.

- ಆನ್‌ಲೈನ್‌ನಲ್ಲಿ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡುವಾಗ ನೈಜ ವಿದ್ಯಾರ್ಥಿಯ ಬದಲು ಬೇರೆ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಿದರೆ ಸಂಸ್ಥೆಯ ಮುಖ್ಯಸ್ಥರ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು.

- ಸಂಸ್ಥೆಯ ಮುಖ್ಯಸ್ಥರು ಲಾಗಿನ್‌ನಲ್ಲಿ ನಾಮಯಾದಿ ಪಟ್ಟಿಯನ್ನು (Nominal Roll) Download ಮಾಡಿಕೊಂಡು ಪರಿಶೀಲಿಸಿ ಶುಲ್ಕ ಪಾವತಿಸಿದ ಮೂಲ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು.

- ಆಂತರಿಕ ಹಾಗೂ ಪ್ರಾಯೋಗಿಕ ಅಂಕಗಳನ್ನು ಮಂಡಳಿಗೆ ಸಲ್ಲಿಸುವ ಬಗ್ಗೆ ನಂತರದ ದಿನಗಳಲ್ಲಿ ತಿಳಿಸಲಾಗುವುದು.

- ಮೇಲಿನ ಎಲ್ಲಾ ನಿಯಮಗಳನ್ನು ಸಂಬಂಧಪಟ್ಟ ಮುಖ್ಯಸ್ಥರು ತಪ್ಪದೇ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಮುಖ್ಯಸ್ಥರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

**ಡಯಟ್ ಪ್ರಾಂಶುಪಾಲರು ಹಾಗೂ ನೋಡಲ್ ಅಧಿಕಾರಿಗಳ ಕರ್ತವ್ಯಗಳು ಹಾಗೂ ಗಮನಿಸಬೇಕಾದ ಅಂಶಗಳು:**

- ಸಂಸ್ಥೆಯ ನೋಂದಣಿ ನವೀಕರಣ ಶುಲ್ಕ ರೂ. 1000/- ಗಳನ್ನು ಪಾವತಿಸಿರುವುದನ್ನು ಖಚಿತಪಡಿಸಿಕೊಳ್ಳುವುದು.

- ಡಯಟ್ ಪ್ರಾಂಶುಪಾಲರು ನಾಮಯಾದಿ ಪಟ್ಟಿಯನ್ನು ದೃಢೀಕರಿಸಿ, ಮಂಡಳಿಗೆ ಸಲ್ಲಿಸುವುದು.

**ಸದರಿ ಪರೀಕ್ಷೆಯ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಶ್ರೀ. ಎಸ್.ಎನ್. ರಮೇಶ್, ಹಿರಿಯ ಸಹಾಯಕ ನಿರ್ದೇಶಕರು, ರಂಗ ಶಿಕ್ಷಣ ಶಾಖೆ, ಇತರೆ ಪರೀಕ್ಷೆಗಳು, 4ನೇ ಮಹಡಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003, ಮೊಬೈಲ್ ಸಂಖ್ಯೆ: 9611237631 ಇವರನ್ನು ಸಂಪರ್ಕಿಸಬಹುದಾಗಿದೆ.**

[ಎಂ.ಆರ್. ಮಾರುತಿ]
ನಿರ್ದೇಶಕರು
ಇತರೆ ಪರೀಕ್ಷೆಗಳು

**ಪ್ರತಿಯನ್ನು:**

1. ಗೌರವಗಳೊಂದಿಗೆ ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಜೆ.ಸಿ.ರಸ್ತೆ, ಬೆಂಗಳೂರು ಮಾಹಿತಿಗಾಗಿ ಸಲ್ಲಿಸಿದೆ.
3. ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಿತ್ರದುರ್ಗ ಜಿಲ್ಲೆ -ಅಗತ್ಯ ಕ್ರಮಕ್ಕಾಗಿ.
4. ಪ್ರಾಂಶುಪಾಲರು, ಶ್ರೀ ಶಿವಕುಮಾರ ರಂಗ ಪ್ರಯೋಗ ಶಾಲೆ, ಸಾಣೆಹಳ್ಳಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ-ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.